**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ,</u>**
**<u>ಶ್ರೀರಂಗಪಟ್ಟಣ.</u>** PW-1

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ 14.03.2025

<u>ಮುಖ್ಯ ವಿಚಾರಣೆ ಃ ವಾದಿ ಪರ ವಕೀಲರಿಂದ</u>

ನಾನು ಈ ದಾವೆಯಲ್ಲಿ ವಾದಿಯಾಗಿದ್ದು, ನನ್ನ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ ಎಂದು, ಪ್ರಮಾಣ ಪತ್ರದಲ್ಲಿ ಹೇಳಲಾದ ಎಲ್ಲಾ ವಿಷಯಗಳು ಸತ್ಯ ಇರುತ್ತವೆ ಮತ್ತು ಪ್ರಮಾಣ ಪತ್ರದಲ್ಲಿ ಇರುವ ಸಹಿ ನನ್ನದಾಗಿರುತ್ತದೆ ಎಂದು ನುಡಿದಿರುತ್ತಾರೆ.

ಈ ದಾವೆಗೆ ಸಂಬಂಧಿಸಿದಂತೆ ಸಾಕ್ಷಿಯು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈ ಕೆಳಗಿನಂತೆ ಗುರುತಿಸಲಾಯಿತು.

ಕ್ರಯದ ಕರಾರು ಪತ್ರವನ್ನು ನಿಪಿ.1 ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ನಿಪಿ.1 ಅನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಅದರಲ್ಲಿ ಸುಶೀಲರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ನಿಪಿ.1 ಅನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಅದರಲ್ಲಿರುವ ಮಹದೇವಮ್ಮರವರ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ನಿಪಿ.1 ಅನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಅದರಲ್ಲಿ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.1(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈಗ ನಿಪಿ.1 ಅನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಅದರಲ್ಲಿ ಇರುವ ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ.1(ಡಿ) ನಿಂದ ನಿಪಿ.1(ಹೆಚ್) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ನಿಪಿ.1 ಅನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಅದರಲ್ಲಿರುವ ಪತ್ರಬರಹಗಾರರದ ಜಿ.ಅನಂತರರಾಮುರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.1(ಐ) ಎಂದು ಗುರುತಿಸಲಾಯಿತು. ಋಣಭಾರ ರಾಹಿತ್ಯ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ನಿಪಿ.2 ಎಂದು, ಲೀಗಲ್ ನೋಟೀಸನ್ನು ನಿಪಿ.3 ಎಂದು, 2 ಅಂಚೆ ರಶೀದಿಗಳನ್ನು ಕ್ರಮವಾಗಿ ನಿಪಿ.4 ಮತ್ತು 5 ಎಂದು, ಅಂಚೆ ಸ್ವೀಕೃತಿ ಪತ್ರವನ್ನು ನಿಪಿ.6 ಎಂದು ಗುರುತಿಸಲಾಯಿತು.

ಆದ್ದರಿಂದ ವಾದ ಪತ್ರದಲ್ಲಿ ತಿಳಿಸಿರುವಂತೆ ದಾವೆಯನ್ನು ಡಿಕ್ರಿ ಮಾಡಬೇಕಾಗಿ ವಿನಂತಿ ಇರುತ್ತದೆ.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ

ಪ್ರತಿವಾದಿ ಪರ ವಕೀಲರು ಗೈರು ಹಾಜರಾಗಿದ್ದು, ಪ್ರತಿವಾದಿಯರು ಪ್ರತಿವಾದ ಪತ್ರವನ್ನು ದಾಖಲು ಮಾಡದೆ ಇದ್ದುದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.